ಉ) ಎ) ರಾಜ್ಯದ ವಿವಿಧ ಭಾಗದ ಜನರು ಅರ್ಜಿಯನ್ನು ನೋಂದಾಯಿಸಿದ್ದು ಹೆಚ್ಚು ಅರ್ಜಿಗಳು ಬಂದಿರುವುದರಿಂದ ಪರಿಶೀಲಿಸಲಾಗುತ್ತಿದೆ ಶೀಘ್ರವಾಗಿ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ

ಬಿ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬೇಡಿಕೆಯ ಸಮೀಕ್ಷೆಯನ್ನು ಕರೆಯಲಾದ ಸ್ಥಳಗಳಲ್ಲಿ ಜಮೀನನ್ನು ಗುರುತಿಸಲಾಗುತ್ತಿದೆ

507(933) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಖ್ಯೆ ಎಷ್ಟು,

ಆ) ಈ ಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು, ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿದ್ದಾರೆಯೇ, ಒಂದು ವೇಳೆ ಶಿಕ್ಷಕರ ಕೊರತೆ ಇದ್ದಲ್ಲಿ ಎಷ್ಟು ಶಿಕ್ಷಕರ ಕೊರತೆ ಇದೆ,

ಇ) ನಿಯಮಗಳ ಪ್ರಕಾರ 40 ವಿದ್ಯಾರ್ಥಿಗಳಿಗೆ ಒಂದು ವಿಭಾಗವನ್ನು (ಸೆಕ್ಷನ್) ತೆರೆಯುವುದು ನಿಜವಲ್ಲವೆ,

ಈ) ಹಾಗಿದ್ದಲ್ಲಿ, 40 ಜನ ವಿದ್ಯಾರ್ಥಿಗಳಿಗೆ ಮೇಲ್ಪಟ್ಟು ಇರುವ ವಿಭಾಗಗಳ ಸಂಖ್ಯೆ ಎಷ್ಟು, ಈ ಪ್ರತಿ ವಿಭಾಗಗಳಲ್ಲಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು,

ಉ) 40ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ವಿಭಾಗಗಳನ್ನು ಪುನರ್ ವಿಂಗಡಿಸಿ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾದಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಪ್ರೌಢಶಾಲೆಗಳು 27, ಪ್ರಾಥಮಿಕ ಶಾಲೆಗಳು 204
ಅನುದಾನಿತ ಪ್ರಾಥಮಿಕ ಶಾಲೆಗಳು 21
ಅನುದಾನಿತ ಪ್ರೌಢಶಾಲೆಗಳು 09

ಆ)

	ವಿದ್ಯಾರ್ಥಿಗಳು	ಶಿಕ್ಷಕರು
ಪ್ರೌಢಶಾಲೆಗಳು	7926	229
ಪ್ರಾಥಮಿಕ ಶಾಲೆಗಳು	38738	1041
ಅನುದಾನಿತ ಪ್ರಾಥಮಿಕ ಶಾಲೆಗಳು	9055	172
ಅನುದಾನಿತ ಪ್ರೌಢಶಾಲೆಗಳು	2771	98

ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿದ್ದಾರೆ ಶಿಕ್ಷಕರ ಕೊರತೆ ಇರುವುದಿಲ್ಲ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ 54 ಶಿಕ್ಷಕರ ಕೊರತೆ ಇದೆ

ಇ) ಹೌದು

ಈ) ವಿಭಾಗಗಳ ಸಂಖ್ಯೆ 83 (83x67=5561)
ಅನುದಾನಿತ ಶಾಲೆಗಳಲ್ಲಿನ ವಿಭಾಗಗಳ ಸಂಖ್ಯೆ 49 (49x44=2156)

ಉ) ಆರ್ಥಿಕ ಮಿತವ್ಯಯ ಜಾರಿಯಲ್ಲಿ ಇರುವುದರಿಂದ ಹೆಚ್ಚುವರಿ ವಿಭಾಗಗಳಿಗೆ ಅನುದಾನರಹಿತ ಮಂಜೂರಾತಿ ನೀಡಲು ಸಧ್ಯಕ್ಕೆ ಆಸ್ಪದವಿಲ್ಲ

508(362) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿರುವ ಉರ್ದು ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು,

ಆ) ಶಾಲೆಗಳಲ್ಲಿ ಖಾಲಿ ಇರುವ ಮತ್ತು ಮಂಜೂರಾದ ಶಿಕ್ಷಕರ ಸಂಖ್ಯೆ ಎಷ್ಟು,

ಇ) ಈ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು,

ಈ) ಸರ್ಕಾರಿ ಹಿರಿಯ ಮತ್ತು ಕಿರಿಯ ಕನ್ನಡ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿಗಳ (ಪಟದ) ಸಂಖ್ಯೆಗೆ ಅನುಗುಣವಾಗಿ ಖಾಲಿ ಇರುವ ಶಿಕ್ಷಕರನ್ನು ಭರ್ತಿ ಮಾಡಲು ಸರ್ಕಾರದ ಕ್ರಮವೇನು?